ವಡ್ಡರಪಾಳ್ಯ ಮಣ್ಣು ವಡ್ಡರಪಾಳ್ಯ

ಮಾಗಡಿ ತಾಲ್ಲೂಕು ಆಸ್ಪತ್ರೆಯಲ್ಲಿ ವೈದ್ಯರ ಕೊರತೆ

3036:(4138)

ಶ್ರೀ ಹೆಚ್.ಸಿ.ಬಾಲಕೃಷ್ಣ (ಮಾಗಡಿ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ತಾಲ್ಲೂಕು ಆಸ್ಪತ್ರೆಯಲ್ಲಿ ಮಹಿಳಾ ವೈದ್ಯರು ಹಾಗೂ ಇತರೆ ವೈದ್ಯರು ಮತ್ತು ಮಾಗಡಿ ವಿದಾನ ಸಭಾ ಕ್ಷೇತ್ರದಲ್ಲಿನ ಸರ್ಕಾರಿ ಪ್ರಾಥಮಿಕ ಆರೋಗ್ಯ ಘಟಕ ಹಾಗೂ ಕೇಂದ್ರಗಳಲ್ಲಿ ಅಗತ್ಯ ಪ್ರಮಾಣದ ವೈದ್ಯರಿಲ್ಲದಿರುವುದರಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ಆಸ್ಪತ್ರೆಯ ವಿವರ ನೀಡುವುದು)

ಆ) ಈ ಆಸ್ಪತ್ರೆಗಳಿಗೆ ಯಾವಾಗ ವೈದ್ಯರನ್ನು ನೇಮಕ ಮಾಡಲಾಗುವುದು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಸಚಿವರು):

ಅ) ಇಲ್ಲ. ಮಾಗಡಿ ವಿಧಾನ ಸಭಾ ಕ್ಷೇತ್ರದಲ್ಲಿ ಬರುವ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಘಟಕಗಳಿಗೆ 16 ಹುದ್ದೆಗಳು ಮಂಜೂರಾಗಿದ್ದು, ಎಲ್ಲಾ ಹುದ್ದೆಗಳನ್ನೂ ಭರ್ತಿ ಮಾಡಲಾಗಿದೆ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ದಂತ ವೈದ್ಯರ ಹುದ್ದೆಗಳ ಭರ್ತಿ

3039:(4141)

ಶ್ರೀ ಯು.ಬಿ.ಬಣಕಾರ್ (ಹಿರೇಕೆರೂರು) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಖಾಲಿ ಇರುವ ದಂತ ವೈದ್ಯರ ಹುದ್ದೆಗಳು ಎಷ್ಟು?

ಆ) ಅವುಗಳ ಭರ್ತಿಗಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಸಚಿವರು):

ಅ) ರಾಜ್ಯದಲ್ಲಿ ಖಾಲಿ ಇರುವ ವಿವಿಧ ವೃಂದದ ದಂತ ವೈದ್ಯರ ಹುದ್ದೆಗಳ ವಿವರ ಈ ಕೆಳಕಂಡಂತಿದೆ:

1) ಸಹಾಯಕ ದಂತ ಶಸ್ತ್ರ ಚಿಕಿತ್ಸಕರ ಒಟ್ಟು ಹುದ್ದೆಗಳು- 77

ಕರ್ನಾಟಕ ರಾಜ್ಯ ಆರೋಗ್ಯ ಪದ್ಧತಿ ಮತ್ತು ಅಭಿವೃದ್ಧಿ ಸಂಸ್ಥೆ ಅಡಿಯಲ್ಲಿ ಹೊಸದಾಗಿ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ- 67

ಒಟ್ಟು 144

2) ಉಪದಂತ ಶಸ್ತ್ರ ಚಿಕಿತ್ಸಕರ ಹುದ್ದೆಗಳ ಸಂಖ್ಯೆ- 15

ಆ) 1. ಖಾಲಿ ಇರುವ ಸಹಾಯಕ ದಂತ ಶಸ್ತ್ರ ಚಿಕಿತ್ಸಕರುಗಳ ಹುದ್ದೆಗಳ ಪೈಕಿ 115 ಹುದ್ದೆಗಳನ್ನು ತುಂಬಲು ಸರ್ಕಾರದ ಅಧಿಸೂಚನೆ ಸಂಖ್ಯೆ : ಡಿಪಿಎಆರ್:2:ಎಸ್ಆರ್‌ಡಿ: 98, ದಿನಾಂಕ: 3- 10- 1998ರ ಪ್ರಕಾರ ನೇಮಕಾತಿ ನಿಯಮಗಳನ್ನು ರೂಪಿಸಿದ್ದು, ಈ ಪ್ರಕ್ರಿಯೆಯು ಪ್ರಗತಿಯಲ್ಲಿದೆ.

2. ಖಾಲಿ ಇರುವ 15 ಉಪ ದಂತ ಶಸ್ತ್ರ ಚಿಕಿತ್ಸಕರ ಹುದ್ದೆಗಳನ್ನು ಸಹಾಯಕ ದಂತ ಶಸ್ತ್ರ ಚಿಕಿತ್ಸಕರ ಹುದ್ದೆಯಿಂದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳ ಪ್ರಕಾರ ಪದೋನ್ನತಿ ಮೇರೆಗೆ ತುಂಬಬೇಕಾಗಿರುತ್ತದೆ.

ಶಿಕ್ಷಕರ ನೇಮಕಾತಿಯಲ್ಲಿ ಗ್ರಾಮಾಂತರ ಪ್ರದೇಶಗಳಲ್ಲಿ ಅಭ್ಯಾಸ ಮಾಡಿದವರಿಗೆ ಕೃಪಾಂಕ ನೀಡುವುದು

304 l:(4 105)

ಶ್ರೀ ಕೆ.ಎಸ್.ಈಶ್ವರಪ್ಪ (ಶಿವಮೊಗ್ಗ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿಕ್ಷಕರ ನೇಮಕಾತಿಯಲ್ಲಿ ಗ್ರಾಮಾಂತರ ಪ್ರದೇಶದಲ್ಲಿ ಅಭ್ಯಾಸ ಮಾಡಿದವರಿಗೆ ಕೃಪಾಂಕ ನೀಡುವ ವಿಚಾರ ಸರ್ಕಾರಕ್ಕೆ ಗೊತ್ತಿದೆಯೇ?

ಆ) ಎಸ್ಎಸ್ಎಲ್‌ಸಿ ಪೂರ್ವಭಾವಿಯಾಗಿ ಕೆಲವು ವರ್ಷಗಳ ಕಾಲ ಗ್ರಾಮಾಂತರ ಪ್ರದೇಶದಲ್ಲಿ ಅಭ್ಯಾಸ ಮಾಡಿದವರಿಗೆ ವರ್ಷಗಳಿಗೆ ಅನುಗುಣವಾಗಿ ಕೃಪಾಂಕಗಳನ್ನು